**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.572/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಶಿವರುದ್ರಮ್ಮ | ಪ್ರಾಸಾ-6 |
| ಗಂಡನ ಹೆಸರು | : ಜಗದೀಶ್ | ಚಾಸಾ-14 |
| ವಯಸ್ಸು | : 50 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಪಿ.ಎಸ್.ಐ | ದಿನಾಂಕಃ 06.10.2025. |
| ವಾಸಸ್ಥಳ | : ಕೊಪ್ಪ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನಾನು ಜುಲೈ 2022 ರಿಂದ ಜನವರಿ 2024 ರವರಗೂ ಕುದುರೆಮುಖ ಪೋಲಿಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.21.10.2023 ರಂದು ಸ.18.00 ರ ಸಮಯಕ್ಕೆ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಸ್ವೀಕರಿಸಿಕೋಂಡು ಠಾ.ಮೊ.ನಂ.18/2023 ರ ಕಲಂ 454 ಮತ್ತು 380 ರ ದಂಡ ಸಂಹಿತ ರಡಿಯಲ್ಲಿ ಪ್ರಕರಣವನ್ನು ದಾಖಲಿಸಿಕೊಂಡು ನಂತರ ಮಾನ್ಯ ಘನ ನ್ಯಾಯಲಯಕ್ಕೂ ಮತ್ತು ನನ್ನ ಮೇಲಾಧಿಕಾರಿಗಳಿಗೆ ನಿವೇದನೆ ಮಾಡಿಕೊಂಡಿರುತ್ತೇನೆ. ಪ್ರಸ್ತುತ ಪ್ರಕರಣವು ಘೋರ ಪ್ರಕರಣವಾದ ಕಾರಣ ಮುಂದಿನ ತನಿಖೆಯ ಸಂಬಂದ ಚಾಸಾ-15 ರವರಿಗೆ ಕಡತವನ್ನು ಹಸ್ತಾಂತರಿಸಿರುತ್ತೇನೆ.

ಸಾಕ್ಷಿಯು ನಿಪಿ-1 ಮತ್ತು 2 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಸಹಿಯನ್ನು ನಿಪಿ-1(ಎ) ಮತ್ತು ನಿಪಿ-2(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಬಿ.ಎನ್.ವಿ. ವಕೀಲರಿಂದಃ**

ದಿ.21.10.2023 ರಂದು ಚಾಸಾ-1 ರವರು ಟೈಪ್ ಮಾಡಿಸಿಕೊಂಡು ದೂರನ್ನು ದಾಖಲಸಿರುತ್ತಾರೆ. ಅದನ್ನು ಎಲ್ಲಿ ಟೈಪ್ ಮಾಡಿಸಲಾಗಿರುತ್ತದೆ ಎಂದು ನನಗೆ ತಿಳಿದಿರುವುದಿಲ್ಲ. ದೂರನ್ನು ನೀಡಲು ಚಾಸಾ-1 ರವರು ಮಾತ್ರ ಠಾಣೆಗೆ ಹಾಜರಾಗಿರುತ್ತಾರೆ. ಸದರಿ ದಿನದಂದು ಚಾಸಾ-1 ರವರು ಯಾವುದೇ ದೂರನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಯ ವಿರುದ್ಧ ಯಾವುದೇ ಆರೋಪ ಸಾಬೀತಾಗದಿದ್ದರೂ ಸುಳ್ಳು ದೋ.ಪ.ಯನ್ನು ಸಲ್ಲಿಸಿರುತ್ತೀರಾ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.